# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಡಾ॥ ಸರೋಜಿನಿ ಮಹಿಷಿ ವರದಿಯ ಪುನರ್ ಪರಿಶೀಲನಾ ಸಮಿತಿಯನ್ನು ರಚಿಸುವ ಬಗ್ಗೆ.

**ಓದಲಾಗಿದೆ:** ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಕಅಪ್ರಾ/ಕಾ2/111/2015-16, ದಿನಾಂಕ: 05.02.2016

**ಪ್ರಸ್ತಾವನೆ:**

ಕರ್ನಾಟಕದಲ್ಲಿರುವ ಕೇಂದ್ರ ಸ್ವಾಮ್ಯದ ಉದ್ದಿಮೆ/ಸಂಸ್ಥೆ/ಕೈಗಾರಿಕೆ/ಕಛೇರಿಗಳು ಹಾಗೂ ಇತರೆ ಖಾಸಗಿ ಕೈಗಾರಿಕೆಗಳಲ್ಲಿ ಕನ್ನಡಿಗರಿಗೆ/ಸ್ಥಳೀಯರಿಗೆ ಉದ್ಯೋಗಾವಕಾಶವನ್ನು ಕಲ್ಪಿಸುವ ದೃಷ್ಟಿಯಿಂದ ಮತ್ತು ಆಡಳಿತದಲ್ಲಿ ಕನ್ನಡ ಅನುಷ್ಠಾನ ಮಾಡುವ ಸಲುವಾಗಿ 1984ರಲ್ಲಿ ಸರ್ಕಾರವು ಡಾ॥ ಸರೋಜಿನಿ ಮಹಿಷಿಯವರ ನೇತೃತ್ವದಲ್ಲಿ ಒಂದು ಸಮಿತಿಯನ್ನು ರಚಿಸಿ ಸಮಿತಿಯ ಶಿಫಾರಸ್ಸುಗಳನ್ನೊಳಗೊಂಡ ವರದಿಯನ್ನು 1986ರಲ್ಲಿ ಸರ್ಕಾರಕ್ಕೆ ಸಲ್ಲಿಸಿತ್ತು. ಪ್ರಸ್ತುತ ಬದಲಾದ ಕಾಲಘಟ್ಟದಲ್ಲಿ ಕೇಂದ್ರ ಹಾಗೂ ಖಾಸಗಿ ಸ್ವಾಮ್ಯದ ಉದ್ದಿಮೆ/ಸಂಸ್ಥೆ/ಕೈಗಾರಿಕೆ/ಕಛೇರಿಗಳ ಹಾಗೂ ಐಟಿಬಿಟಿ ಸಂಸ್ಥೆಗಳನ್ನು ಸದರಿ ವರದಿಯ ಶಿಫಾರಸ್ಸಿನ ಅಡಿಯಲ್ಲಿ ತರುವ ಅವಶ್ಯಕತೆಯಿರುವ ಹಿನ್ನೆಲೆಯಲ್ಲಿ ಈಗಿನ ಕಾಲಘಟ್ಟಕ್ಕೆ ತಕ್ಕಂತೆ ಡಾ॥ ಸರೋಜಿನಿ ಮಹಿಷಿ ವರದಿಯನ್ನು ಪುನರ್ ಪರಾಮರ್ಶಿಸಿ, ಸರ್ಕಾರಕ್ಕೆ ವರದಿ ಸಲ್ಲಿಸಲು ಕನ್ನಡ ನಾಡು ನುಡಿ ಹಾಗೂ ಆಡಳಿತದಲ್ಲಿ ಅನುಭವವಿರುವ ಕೆಳಕಂಡ ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಲು ಮೇಲೆ ಓದಲಾದ ಪತ್ರದಲ್ಲಿ ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ರವರು ಕೋರಿರುತ್ತಾರೆ.

| | | |
|---|---|---|
| 1 | ಡಾ. ಎಲ್. ಹನುಮಂತಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ | ಅಧ್ಯಕ್ಷರು |
| 2 | ಶ್ರೀ ಗೊ.ರು.ಚನ್ನಬಸಪ್ಪ, ನಿಕಟಪೂರ್ವ ಅಧ್ಯಕ್ಷರು, ಕರ್ನಾಟಕ ನಾಟಕ ಅಕಾಡೆಮಿ | ಸದಸ್ಯರು |
| 3 | ಶ್ರೀ ಬಿ.ಎಲ್.ಶಂಕರ್, ಅಧ್ಯಕ್ಷರು, ಕರ್ನಾಟಕ ಚಿತ್ರಕಲಾ ಪರಿಷತ್ತು | ಸದಸ್ಯರು |
| 4 | ಶ್ರೀಮತಿ ಹೇಮಲತಾ ಮಹಿಷಿ, ಸಾಹಿತಿಗಳು | ಸದಸ್ಯರು |
| 5 | ಶ್ರೀ ರಾ.ನಂ ಚಂದ್ರಶೇಖರ, ಸಂಪಾದಕರು, ಕರ್ನಾಟಕ ಕಾರ್ಮಿಕ ಲೋಕ ಪತ್ರಿಕೆ | ಸದಸ್ಯರು |
| 6 | ಡಾ॥ಕೆ. ಮುರುಳಿಧರ, ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿ |

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 12 ಕೆಬಿಎಲ್ 2016**
**ಬೆಂಗಳೂರು, ದಿನಾಂಕ: 13.06.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕೇಂದ್ರ ಹಾಗೂ ಖಾಸಗಿ ಸ್ವಾಮ್ಯದ ಉದ್ದಿಮೆ/ಸಂಸ್ಥೆ/ಕೈಗಾರಿಕೆ/ಕಛೇರಿಗಳ ಹಾಗೂ ಐಟಿಬಿಟಿ ಸಂಸ್ಥೆಗಳನ್ನು ಡಾ॥ ಸರೋಜಿನಿ ಮಹಿಷಿ ವರದಿಯ ಶಿಫಾರಸ್ಸಿನ ಅಡಿಯಲ್ಲಿ ತರುವ ಅವಶ್ಯಕತೆಯಿರುವ ಹಿನ್ನೆಲೆಯಲ್ಲಿ ಈಗಿನ ಕಾಲಘಟ್ಟಕ್ಕೆ ತಕ್ಕಂತೆ ಡಾ॥ ಸರೋಜಿನಿ ಮಹಿಷಿ ವರದಿಯನ್ನು ಪುನರ್ ಪರಾಮರ್ಶಿಸಿ, ಸರ್ಕಾರಕ್ಕೆ ವರದಿ ಸಲ್ಲಿಸಲು ಕನ್ನಡ ನಾಡು ನುಡಿ ಹಾಗೂ ಆಡಳಿತದಲ್ಲಿ ಅನುಭವವಿರುವ ಈ ಕೆಳಕಂಡ ಸದಸ್ಯರನ್ನೊಳಗೊಂಡ ಸಮಿತಿಯನ್ನು ರಚಿಸಿ ಆದೇಶಿಸಿದೆ:-

| | | |
|---|---|---|
| 1 | ಡಾ. ಎಲ್. ಹನುಮಂತಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ | ಅಧ್ಯಕ್ಷರು |
| 2 | ಶ್ರೀ ಗೊ.ರು.ಚನ್ನಬಸಪ್ಪ, ನಿಕಟಪೂರ್ವ ಅಧ್ಯಕ್ಷರು, ಕರ್ನಾಟಕ ನಾಟಕ ಅಕಾಡೆಮಿ | ಸದಸ್ಯರು |

| | | |
|---|---|---|
| 3 | ಶ್ರೀ ಬಿ.ಎಲ್.ಶಂಕರ್, ಅಧ್ಯಕ್ಷರು, ಕರ್ನಾಟಕ ಚಿತ್ರಕಲಾ ಪರಿಷತ್ತು | ಸದಸ್ಯರು |
| 4 | ಶ್ರೀಮತಿ ಹೇಮಲತಾ ಮಹಿಷಿ, ಸಾಹಿತಿಗಳು | ಸದಸ್ಯರು |
| 5 | ಶ್ರೀ ರಾ.ನಂ ಚಂದ್ರಶೇಖರ, ಸಂಪಾದಕರು, ಕರ್ನಾಟಕ ಕಾರ್ಮಿಕ ಲೋಕ ಪತ್ರಿಕೆ | ಸದಸ್ಯರು |
| 6 | ಡಾ||ಕೆ. ಮುರುಳಿಧರ, ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ, ಮತ್ತು ವಾರ್ತಾ ಇಲಾಖೆ.
(ಆಡಳಿತ ಕನ್ನಡ)

ಇವರಿಗೆ:-

1. ಪ್ರಧಾನ ಮಹಾಲೇಖಪಾಲಕರು, (ಜಿ &ಎಸ್.ಎಸ್. ಎ) ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು- 560 001.
2. ಪ್ರಧಾನ ಮಹಾಲೇಖಪಾಲಕರು, (ಇ & ಆರ್.ಎಸ್. ಎ) ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು- 560 001.
3. ಪ್ರಧಾನ ಮಹಾಲೇಖಪಾಲಕರು, (ಎ &ಇ) ಕರ್ನಾಟಕ, ಪಾರ್ಕ್ ಹೌಸ್, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು- 560 001.
4. ~~ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು~~
5. ಕಾರ್ಯದರ್ಶಿಗಳು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು
6. ಸಂಬಂಧಿಸಿದ ತಾಂತ್ರಿಕ ಸಲಹಾ ಸಮಿತಿ ಸದಸ್ಯರುಗಳಿಗೆ – ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು ರವರ ಮುಖಾಂತರ.
7. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
8. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು, ವಿಧಾನಸೌಧ, ಬೆಂಗಳೂರು
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.